**All India Radio: Bangalore**
**Regional Bulletin In Kannada**
**07.08.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**07.08.2025 / 6.40 p.m**
ಮುಖ್ಯಾಂಶಗಳು

೧. ವರ್ಷಾಂತ್ಯದೊಳಗೆ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಚುನಾವಣೆ ; ಪ್ರಿಯಾಂಕ್ ಖರ್ಗೆ

೨. ಪರಿಶಿಷ್ಟ ಸಮುದಾಯದ ಒಳ ಮೀಸಲಾತಿ ; ನ್ಯಾಯಮೂರ್ತಿ ನಾಗಮೋಹನ್ ದಾಸ್ ವರದಿ ಕುರಿತು ಇದೇ ೧೬ ರಂದು ವಿಶೇಷ ಸಂಪುಟ ಸಭೆಯಲ್ಲಿ ನಿರ್ಧಾರ

೩. ಪ್ರಜಾಪ್ರಭುತ್ವ ಕೆಡವಲು ಚುನಾವಣಾ ಆಯೋಗ ಸಹಕರಿಸುತ್ತಿದೆ - ಲೋಕಸಭಾ ವಿಪಕ್ಷ ನಾಯಕ ರಾಹುಲ್ ಗಾಂಧಿ

೪. ಏಷ್ಯಾದ ಅಭಿವೃದ್ಧಿಗೆ ಭಾರತದೊಂದಿಗೆ ಹೆಚ್ಚಿನ ಪಾಲುದಾರಿಕೆ ; ಫಿಲಿಪೈನ್ಸ್ ಅಧ್ಯಕ್ಷ ಅಭಿಮತ

><><><><><><><><><

ಜಿಲ್ಲಾ ಮತ್ತು ತಾಲೂಕು ಪಂಚಾಯತ್ ಚುನಾವಣೆಯನ್ನು ಈ ವರ್ಷಾಂತ್ಯದಲ್ಲಿ ಮಾಡಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಹುಬ್ಬಳ್ಳಿ ವಿಮಾನ ನಿಲ್ದಾಣದಲ್ಲಿ ಮಾತನಾಡಿದ ಅವರು, ಮೀಸಲಾತಿ ಪ್ರಕ್ರಿಯೇ ನಡೆಯುತ್ತಿದ್ದು, ೨-೩ ತಿಂಗಳಲ್ಲಿ ನೋಟಿಫಿಕೇಶನ್ ಆಗಲಿದೆ ಎಂದ ಅವರು ಹೇಳಿದರು. ಮೀಸಲಾತಿ ಕುರಿತು ಹೈಕೋರ್ಟ್‌ನಲ್ಲಿ ಒಪ್ಪಿಕೊಂಡಿದ್ದು, ಅದರ ಆಂತರಿಕ ಕೆಲಸ ನಡೆಯುತ್ತಿದೆ. ಈ ವರ್ಷದಲ್ಲಿಯೇ ಜಿಲ್ಲಾ ಪಂಚಾಯತ್ ಮತ್ತು ತಾಲೂಕು ಪಂಚಾಯತ್ ಚುನಾವಣೆ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದರು.

><><><><><><><><><

ಪರಿಶಿಷ್ಟ ಸಮುದಾಯದ ಒಳ ಮೀಸಲಾತಿ ಕುರಿತಂತೆ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್ ದಾಸ್ ಆಯೋಗದ ವರದಿ ಎಲ್ಲಾ ಸಚಿವರಿಗೆ ನೀಡಲಾಗಿದ್ದು, ಇದೇ ೧೬ ರಂದು ವಿಶೇಷ ಸಂಪುಟ ಸಭೆಯಲ್ಲಿ ಚರ್ಚಿಸಿ ನಿರ್ಣಯ ಕೈಗೊಳ್ಳಲಾಗುವುದು ಎಂದು ಕಾನೂನು ಮತ್ತು ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ್ ಹೇಳಿದ್ದಾರೆ. ಇಂದು ನಡೆದ ಸಚಿವ ಸಂಪುಟ ಸಭೆಯ ನಿರ್ಣಯಗಳಿಗೆ ಸಂಬಂಧಿಸಿದಂತೆ ಸುದ್ದಿಗಾರರನ್ನು ಉದ್ದೇಶಿಸಿ ಮಾತನಾಡಿದ ಅವರು, ನ್ಯಾಯಮೂರ್ತಿಗಳು ಪರಿಶಿಷ್ಟ ಸಮುದಾಯದ ಶೇಕಡ ೯೫ರಷ್ಟು ಜನರನ್ನು ಸಮೀಕ್ಷೆ ಮಾಡಿ ವೈಜ್ಞಾನಿಕ ವರದಿ ಸಲ್ಲಿಸಿದ್ದಾರೆ. ಈ ಕುರಿತು ಎಲ್ಲಾ ಸಚಿವರು ಕೂಲಂಕುಶವಾಗಿ ಅಧ್ಯಯನ ನಡೆಸಿ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಸಚಿವ ಸಂಪುಟ ಸಭೆಯಲ್ಲಿ ನಬಾರ್ಡ್ ಅನುದಾನದಲ್ಲಿ ಸ್ಥಾಪಿಸಲಾಗುತ್ತಿರುವ ೧೩ ಶಿಥಲ ಘಟಕಗಳಿಗೆ ೧೭೧ ಕೋಟಿ ೯೧ ಲಕ್ಷ ರೂಪಾಯಿಗಳ ಪರಿಷ್ಕೃತ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಗದಗ, ಬೆಟಗೇರಿ, ವಾಣಿಜ್ಯ, ಸಾಂಸ್ಕೃತಿಕ ಪ್ರದರ್ಶನ ಪ್ರಾಧಿಕಾರ ವಿಧೇಯಕಕ್ಕೆ ಅನುಮೋದನೆ ನೀಡಲಾಗಿದೆ.

**ಧ್ವನಿ : ಎಚ್.ಕೆ. ಪಾಟೀಲ್ (೨೮ ಸೆಕೆಂಡ್‌ಗಳು)**

ಜಲ ಸಂಪನ್ಮೂಲ ಇಲಾಖೆ ಮೈಸೂರು ಜಿಲ್ಲೆಯ ಹುಣಸೂರಿನ ಕಟ್ಟೆ ಮಳವಾಡಿ ಅಣೆಕಟ್ಟು, ಒಡಕೆ ಕಟ್ಟು, ಹೈಲೆವಲ್ ನಾಲೆ ದುರಸ್ಥಿಗಾಗಿ ೪೯ ಕೋಟಿ ೮೫ ಲಕ್ಷ ರೂಪಾಯಿ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಿದೆ. ಹಾರಂಗಿ ಬಲದಂಡೆ, ಹೇಮಾವತಿ ಎಡದಂಡೆ ಕಾಮಗಾರಿ ಯೋಜನೆಗಳಿಗೆ ಆಡಳಿತಾತ್ಮಕ ಅನುಮೋದನೆಯನ್ನು ಸಚಿವ ಸಂಪುಟ ಸಭೆಯಲ್ಲಿ ನೀಡಲಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ್ ತಿಳಿಸಿದ್ದಾರೆ.

><><><><><><><><

ಪ್ರಜಾಪ್ರಭುತ್ವವನ್ನು ವ್ಯವಸ್ಥಿತವಾಗಿ ಕೆಡವಲು ಚುನಾವಣಾ ಆಯೋಗ ಸಹಾಯ ಮಾಡುತ್ತಿದೆ ಎಂದು ಹಿರಿಯ ಕಾಂಗ್ರೆಸ್ ಸಂಸದ ಮತ್ತು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಭಾರತೀಯ ಚುನಾವಣಾ ಆಯೋಗದ ಮೇಲೆ ಇಂದು ತೀವ್ರ ದಾಳಿ ನಡೆಸಿದರು. ಕಾಂಗ್ರೆಸ್ ಪ್ರಧಾನ ಕಚೇರಿಯಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು, ಚುನಾವಣಾ ಆಯೋಗ ಚುನಾವಣೆಗಳಲ್ಲಿ ಬಿಜೆಪಿಯೊಂದಿಗೆ ಶಾಮೀಲಾಗಿ ಪ್ರಜಾಪ್ರಭುತ್ವವನ್ನು ವ್ಯವಸ್ಥಿತವಾಗಿ ಕೆಡವಲು ಸಹಾಯ ಮಾಡಿದೆ ಎಂದು ಆರೋಪಿಸಿದರು. ಅಭಿಪ್ರಾಯ ಸಂಗ್ರಹಗಳು, ಪಕ್ಷದ ಆಂತರಿಕ ಸಮೀಕ್ಷೆಗಳು ಮತ್ತು ನಿಜವಾದ ಫಲಿತಾಂಶಗಳ ನಡುವಿನ ವ್ಯತ್ಯಾಸವನ್ನು ಸೂಚಿಸಿದ ಅವರು, ವಿಶೇಷವಾಗಿ ಕರ್ನಾಟಕ, ಹರಿಯಾಣ ಮತ್ತು ಮಧ್ಯಪ್ರದೇಶದಂತಹ ರಾಜ್ಯಗಳ ಫಲಿತಾಂಶಗಳಲ್ಲಿ ಆಯೋಗದ ಕೈವಾಡ ಇದೆ ಎಂದರು. ಮತದಾರರ ಪಟ್ಟಿ ಮತ್ತು ಇತ್ತೀಚಿನ ಚುನಾವಣೆಗಳ ವಿಶ್ವಾಸಾರ್ಹತೆಯ ಬಗ್ಗೆ ಗಂಭೀರ ಕಳವಳ ವ್ಯಕ್ತಪಡಿಸಿದ ರಾಹುಲ್ ಗಾಂಧಿ, ಮತದಾರರ ಪಟ್ಟಿ ಇನ್ನೂ ನಿಖರವಾಗಿರುವ ಬಗ್ಗೆ ಸಾರ್ವಜನಿಕರಲ್ಲಿ ಅನುಮಾನ ಹೆಚ್ಚುತ್ತಿದೆ ಇದಕ್ಕೆ ಸಕಾರಣವಿದೆ ಎಂದು ಅವರು ಹೇಳಿದರು.

><><><><><><><><

ತಾಯಿ ಎದೆಹಾಲು ಅಮೃತಕ್ಕೆ ಸಮಾನವಾಗಿದ್ದು ಸದೃಢ ಮಗುವಿನ ಆರೋಗ್ಯದ ದೃಷ್ಠಿಯಿಂದ ತಾಯಂದಿರು ನವಜಾತ ಶಿಶುಗಳಿಗೆ ಎದೆಹಾಲು ನೀಡುವಲ್ಲಿ ನಿರ್ಲಕ್ಷ್ಯ ಮಾಡಬಾರದು ಎಂದು ವಿಜಯಪುರ ಜಿಲ್ಲಾ ಸರಕಾರಿ ಆಸ್ಪತ್ರೆಯ ಶಸ್ತ್ರ ಚಿಕಿತ್ಸಕ ಡಾ|| ಶಿವಾನಂದ ಮಾಸ್ತಿಹೊಳಿ ಕಿವಿಮಾತು ಹೇಳಿದರು. ವಿಜಯಪುರದಲ್ಲಿ ಜರುಗಿದ ಸ್ತನ್ಯಪಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಗರ್ಭಿಣಿ ಹಾಗೂ ಬಾಣಂತಿಯರಿಗಾಗಿ ಹಾಗೂ ಮಕ್ಕಳ ಆರೋಗ್ಯ ಸುಧಾರಣೆಗಾಗಿ ಕೇಂದ್ರ ಮತ್ತು ರಾಜ್ಯ ಸರಕಾರದ ಹಲವಾರು ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು. ತಾಯಿ ತನ್ನ ಮಗುವಿಗೆ ಎದೆಹಾಲು ಉಣಿಸುವುದರಿಂದ ಮಗುವಿನ ಆರೋಗ್ಯದಲ್ಲಿ ಧನಾತ್ಮಕ ಪರಿಣಾಮಗಳಾಗುತ್ತವೆ, ಮಗುವಿನ ಬುದ್ದಿಶಕ್ತಿಯನ್ನು ಹೆಚ್ಚಿಸುತ್ತದೆ, ಮಗುವಿನ ಹಾಲುಣಿಸುವಿಕೆಯಿಂದ ಸಾಂಕ್ರಾಮಿಕ ಕಾಯಿಲೆಗಳು, ಅತೀಸಾರ, ಉಸಿರಾಟದ ಸೋಂಕುಗಳನ್ನು ದೂರವಿಡಬಹುದು ಎಂದು ಸಲಹೆ ನೀಡಿದ್ದಾರೆ.

><><><><><><><><

ಏಷ್ಯಾದಲ್ಲಿ ಸಮೃದ್ಧಿ ಮತ್ತು ಬೆಳವಣಿಗೆಯನ್ನು ನಿರ್ಮಿಸಲು ಭಾರತದೊಂದಿಗೆ ಹೆಚ್ಚಿನ ಪಾಲುದಾರಿಕೆಯನ್ನು ಫಿಲಿಪೈನ್ಸ್ ಅಧ್ಯಕ್ಷ ಫರ್ಡಿನ್ಯಾಂಡ್ ರೊಮ್ನಾಲ್ಡೆಜ್ ಮಾರ್ಕೋಸ್ ಜೂನಿಯರ್ ಕೋರಿದ್ದಾರೆ. ಇಂದು

ಬೆಂಗಳೂರಿನಲ್ಲಿ ನಡೆದ ಫಿಲಿಪೈನ್ಸ್-ಭಾರತ ವ್ಯಾಪಾರ ವೇದಿಕೆಯನ್ನು ಉದ್ದೇಶಿಸಿ ಮಾತನಾಡುತ್ತಿದ್ದ ಅವರು, ಎರಡೂ ದೇಶಗಳು ಪ್ರಾದೇಶಿಕ ಜ್ಞಾನವನ್ನು ಹಂಚಿಕೊಂಡು ರೂಪಿಸುವುದರ ಮೂಲಕ ಪೂರೈಕೆ ಸರಪಳಿ ಸ್ಥಿತಿಸ್ಥಾಪಕತ್ವವನ್ನು ಹೆಚ್ಚಿಸಬಹುದು ಮತ್ತು ಈ ಪ್ರದೇಶದಲ್ಲಿ ಸಮಗ್ರ ನಾವೀನ್ಯತೆಯನ್ನು ಖಚಿತಪಡಿಸಿಕೊಳ್ಳಬಹುದು ಎಂದು ಹೇಳಿದರು. ವಿದ್ಯುತ್ ವಾಹನಗಳು, ಸುಧಾರಿತ ಎಲೆಕ್ಟ್ರಾನಿಕ್ಸ್, ನವೀಕರಿಸಬಹುದಾದ ಇಂಧನ, ಕೃಷಿ, ಆರೋಗ್ಯ ಮತ್ತು ಸೈಬರ್ ಭದ್ರತೆ ಕ್ಷೇತ್ರಗಳಲ್ಲಿ ದೀರ್ಘಾವಧಿಯ ಸಹಯೋಗಕ್ಕಾಗಿ ಆರು ಆದ್ಯತೆಯ ಕ್ಷೇತ್ರಗಳ ಬಗ್ಗೆ ಮಾತನಾಡಿದ ಫಿಲಿಪೈನ್ಸ್ ಅಧ್ಯಕ್ಷ, ಉಭಯ ರಾಷ್ಟ್ರಗಳ ನಡುವಿನ ವ್ಯಾಪಾರವನ್ನು ಹೆಚ್ಚಿಸಲು, ಉತ್ಪನ್ನ ವೈವಿಧ್ಯೀಕರಣ ಮತ್ತು ಪೂರೈಕೆ ಸರಪಳಿ ಏಕೀಕರಣವನ್ನು ಉತ್ತೇಜಿಸಲು ಫಿಲಿಪೈನ್ಸ್ ಭಾರತದೊಂದಿಗೆ ಆದ್ಯತೆಯ ವ್ಯಾಪಾರ ಒಪ್ಪಂದಗಳನ್ನು ಅನುಸರಿಸುತ್ತದೆ ಎಂದು ಅವರು ಮಾಹಿತಿ ನೀಡಿದರು. ಇಂದು ನಡೆದ ಚರ್ಚೆಗಳ ಸಂದರ್ಭದಲ್ಲಿ, ಮಾಹಿತಿ ತಂತ್ರಜ್ಞಾನ, ದೂರಸಂಪರ್ಕ, ತ್ಯಾಜ್ಯದಿಂದ ಇಂಧನ ಉತ್ಪಾದನೆ, ಆರೋಗ್ಯ ರಕ್ಷಣೆ, ವ್ಯವಹಾರ ಪ್ರಕ್ರಿಯೆ ನಿರ್ವಹಣೆ ಮತ್ತು ಡಿಜಿಟಲ್ ಮೂಲಸೌಕರ್ಯ ಕ್ಷೇತ್ರಗಳಲ್ಲಿ ಫಿಲಿಪೈನ್ಸ್‌ನಲ್ಲಿ ಹೂಡಿಕೆ ಮಾಡಲು ಭಾರತೀಯ ಕಂಪನಿಗಳು ೧೮ ತಿಳುವಳಿಕೆ ಪತ್ರಗಳು ಮತ್ತು ಉದ್ದೇಶ ಪತ್ರಗಳಿಗೆ ಸಹಿ ಹಾಕಿದವು.

><><><><><><><><><

ಕೋಲಾರ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್, ಯೂನಿಯನ್ ಬ್ಯಾಂಕ್ ಆಪ್ ಇಂಡಿಯಾ ಹಾಗೂ ಆರ್ಥಿಕ ಸಾಕ್ಷರತಾ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಕೋಲಾರ ತಾಲೂಕಿನ ಬೆಳ್ಳೂರು ಗ್ರಾಮಪಂಚಾಯಿತಿಯಲ್ಲಿ ಕೇಂದ್ರ ಸರ್ಕಾರದ ಭದ್ರತಾ ಯೋಜನೆಗಳ ಜನಸುರಕ್ಷಾ ಅಭಿಯಾನ ಜರುಗಿತು. ಕೊಡಗು ಜಿಲ್ಲಾ ಲೀಡ್ ಬ್ಯಾಂಕ್ ವತಿಯಿಂದ ಹೊಸ್ಕೇರಿ ಗ್ರಾಮದಲ್ಲಿ, ಜನ ಸುರಕ್ಷಾ ಅಭಿಯಾನ ನಡೆಯಿತು. ಕೊಡಗು ಜಿಲ್ಲಾ ಲೀಡ್ ಬ್ಯಾಂಕ್ ವ್ಯವಸ್ಥಾಪಕರಾದ ಗಂಗಾಧರ್ ನಾಯಕ್ ಅವರು ಮಾತನಾಡಿ ಜನ ಸಾಮಾನ್ಯರು ಕಡ್ಡಾಯವಾಗಿ ಸಾಮಾಜಿಕ ಭದ್ರತಾ ಯೋಜನೆ ಮಾಡಿಸುವುದರ ಮೂಲಕ ಅದರ ಪ್ರಯೋಜನ ಪಡೆದುಕೊಳ್ಳುವಂತೆ ಸಲಹೆ ನೀಡಿದರು.

><><><><><><><><><

ಗ್ರಾಮೀಣ ಪ್ರದೇಶಗಳು ಶುಚಿತ್ವದಿಂದ ಕೂಡಿದ್ದರೆ, ಗ್ರಾಮದಲ್ಲಿ ಯಾವುದೇ ಸಾಂಕ್ರಾಮಿಕ ರೋಗ ಹರಡಲು ಸಾಧ್ಯವಾಗದು ಎಂದು ಗದಗ ಜಿಲ್ಲೆಯ ಗಜೇಂದ್ರಗಡ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಕಂದಕೂರ ತಿಳಿಸಿದರು. ಗಜೇಂದ್ರಗಡ ತಾಲೂಕಿನ ಮಾರನಬಸರಿ ಗ್ರಾಮದಲ್ಲಿ ಮನೆಗಳಿಗೆ ತೆರಳಿ ಅವರು, ಕಸ ವಿಲೇವಾರಿ ಬಗ್ಗೆ ಅರಿವು ಮೂಡಿಸಿದರು. ಮನೆಯಲ್ಲಿ ಬಳಸಿ ಬೇಡವಾದ ಕಸವನ್ನು ಒಣ ಕಸ ಮತ್ತು ಹಸಿ ಕಸ ಎಂದು ಬೇರ್ಪಡಿಸಿ. ಒಣ ಕಸ ಮತ್ತು ಹಸಿ ಕಸ ಸಂಗ್ರಹಕ್ಕೆ ಗ್ರಾಮ ಪಂಚಾಯತ ಅವರು ಪ್ರತ್ಯೇಕವಾಗಿ ಕಸದಬುಟ್ಟಿ ನೀಡಿದ್ದಾರೆ. ಕಸದಬುಟ್ಟಿಯಲ್ಲೇ ಕಸ ಸಂಗ್ರಹಿಸಿ ಕಸದ ವಾಹಿನಿ ಬಂದಾಗ ಸ್ವಚ್ಛತೆಗಾರರ ಮೂಲಕ ಕಸದವಾಹಿನಿಗೆ ಕಸ ಹಾಕಿ. ಮನೆ-ಗ್ರಾಮ ಕಸ ಮುಕ್ತವಾದರೆ ಗ್ರಾಮದ ವಾತಾವರಣ ಆರೋಗ್ಯಯುತವಾಗುತ್ತದೆ ಎಂದರು.

><><><><><><><><><

ಕೈಮಗ್ಗ ನೇಕಾರರು ಮತ್ತು ಗುಡಿ ಕೈಗಾರಿಕೆಗಳು ಭಾರತದ  ಅಸ್ತಿತ್ವ ಎಂದು ದಾವಣಗೆರೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ ವಿಠಲ ರಾವ್ ಅಭಿಪ್ರಾಯ ವ್ಯಕ್ತಪಡಿಸಿದರು. ದಾವಣಗೆರೆಯಲ್ಲಿಂದು ಹಮ್ಮಿಕೊಂಡಿದ್ದ ೧೧ನೇ ರಾಷ್ಟ್ರೀಯ ಕೈಮಗ್ಗ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಸ್ವಾತಂತ್ರ್ಯ ಪೂರ್ವದಲ್ಲಿ ವಿದೇಶಿ ಉತ್ಪನ್ನಗಳ ಹಾವಳಿ, ದುಪ್ಪಟ್ಟು ದರ ಉಪಟಳ ಹೆಚ್ಚಾಗಿತ್ತು ಎಂದರು.

><><><><><><><><><